**All India Radio: Bangalore**
**Regional Bulletin In Kannada**
**17.04.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.04.2026 / 2.30 p.m.**

**<><><><>**

ಮುಖ್ಯಾಂಶಗಳು

1. ಕೃತಕಬುದ್ಧಿಮತ್ತೆ ಪರಿಸರ ಬಲಪಡಿಸುವ ಉತ್ಕೃಷ್ಟತಾ ಕೇಂದ್ರ ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ
2. ಇಂದು ವಿಶ್ವ ಹಿಮೋಫಿಲಿಯಾ ಜಾಗೃತಿ ದಿನ ; ಕುಸುಮ ರೋಗದ ಆರೈಕೆ ಬಗ್ಗೆ ಅರಿವು ಕಾರ್ಯಕ್ರಮ
3. ದೂರದರ್ಶನ ಚಂದನ ವಾಹಿನಿಯಿಂದ ಗ್ರಾಮೀಣ ಸೊಗಡಿನ ರೈತ ರತ್ನ ಕಾರ್ಯಕ್ರಮ ; ನಾಳೆಯಿಂದ ಪ್ರತಿ ಶನಿವಾರ ಪ್ರಸಾರ
4. ಭೂ ದಾಖಲೆಗಳ ಸ್ಕ್ಯಾನಿಂಗ್ ಬಗ್ಗೆ ಕಾಳಜಿ ವಹಿಸಲು ಅಧಿಕಾರಿಗಳಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೂಚನೆ

<><><><>

ಬೆಂಗಳೂರಿನ ಎಲೆಕ್ಟ್ರಾನಿಕ್ಸ್ ಸಿಟಿಯಲ್ಲಿರುವ ಜೈವಿಕ, ಮಾಹಿತಿ ಮತ್ತು ಅನ್ವಯಿಕ ಜೈವಿಕ ತಂತ್ರಜ್ಞಾನ ಸಂಸ್ಥೆ-ಐಬಿಎಬಿಯಲ್ಲಿ ಕೃತಕಬುದ್ಧಿಮತ್ತೆಯ ಉತ್ಕೃಷ್ಟತಾ ಕೇಂದ್ರವನ್ನು ಸ್ಥಾಪಿಸಲು ರಾಜ್ಯ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ಮಾಹಿತಿ ಮತ್ತು ಜೈವಿಕ ತಂತ್ರಜಾನ ಸಚಿವ ಪ್ರಿಯಾಂಕ್ ಖರ್ಗೆ ಈ ವಿಷಯ ತಿಳಿಸಿದ್ದಾರೆ. ಒಟ್ಟು ೪ ವರ್ಷಗಳ ಅವಧಿಗೆ ಒಟ್ಟು ೨೦ ಕೋಟಿ ರೂಪಾಯಿ ವೆಚ್ಚದಲ್ಲಿ ಐಬಿಎಬಿ ಮತ್ತು ಸೆಂಟರ್ ಫಾರ್ ಸೆಲ್ಯುಲಾರ್ ಮತ್ತು ಮಾಲಿಕ್ಯುಲರ್ ಪ್ಲಾಟ್‌ಫಾರ್ಮ್ ಸಿ-ಕ್ಯಾಂಪ್ ಪಾಲುದಾರಿಕೆಯಲ್ಲಿ ಈ ಕೇಂದ್ರ ಸ್ಥಾಪಿಸಲು ಉದ್ದೇಶಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಇಂದು, ವಿಶ್ವ, ಹಿಮೋಫಿಲಿಯಾ ಜಾಗೃತಿ ದಿನ. ಈ ಸಂದರ್ಭದಲ್ಲಿ ವಿವಿಧ ಸಂಘಸಂಸ್ಥೆಗಳು ಜಾಗೃತಿ ಶಿಬಿರ ಹಾಗೂ ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳನ್ನು ಹಮ್ಮಿಕೊಂಡಿವೆ. ರೋಗ

ನಿರ್ಣಯ; ಆರೈಕೆಗೆ ಮೊದಲ ಹೆಜ್ಜೆ ಎಂಬ ಘೋಷವಾಕ್ಯದೊಂದಿಗೆ ವರ್ಲ್ಡ್ ಫೆಡರೇಶನ್ ಆಫ್ ಹಿಮೋಫಿಲಿಯಾ ವಿಶ್ವಾದ್ಯಂತ ಅನುವಂಶಿಕವಾಗಿ ರಕ್ತಸ್ರಾವದ ಅಸ್ವಸ್ಥತೆಗಳನ್ನು ಹೊಂದಿರುವ ಅಂದಾಜು ಶೇಕಡ ೭೫ ಕ್ಕಿಂತ ಹೆಚ್ಚು ಜನರನ್ನು ಗುರುತಿಸುವ ತುರ್ತು ಅಗತ್ಯವನ್ನು, ಒತ್ತಿ ಹೇಳುತ್ತದೆ. ಕುಸುಮ ರೋಗದ ಆರೋಗ್ಯಾಕಾಂಕ್ಷಿಗಳಿಗೆ, ಸರಿಯಾದ ಚಿಕಿತ್ಸೆ ಮತ್ತು ಆರೈಕೆ ಸಕಾಲಿಕವಾಗಿ ಲಭಿಸಿದಲ್ಲಿ, ಸುಧಾರಿತ ಜೀವನ ಸಾಧ್ಯ ಎಂಬ ವಿಶ್ವಾಸ ಮೂಡಿಸುವುದು ಕಾರ್ಯಕ್ರಮಗಳ ಉದ್ದೇಶವಾಗಿವೆ. ೨೦೧೮ರ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದ ಡಾ. ಸುರೇಶ್ ಹನಗವಾಡಿ ಅವರು ತಮ್ಮ ಅದ್ಭುತ ಜೀವನಯಾನದ ಪ್ರೇರಣಾದಾಯಕ ಅನುಭವಗಳನ್ನು ಆಕಾಶವಾಣಿಯ ಸುದ್ದಿವಿಭಾಗದೊಂದಿಗೆ ಹಂಚಿಕೊಂಡಿದ್ದಾರೆ.

**ಧ್ವನಿ: ಡ.ಸುರೇಶ್ ಹನಗವಾಡಿ (೩೦ ಸೆಕೆಂಡ್‌ಗಳು)**

<><><><>

ಪ್ರಸಾರ ಭಾರತಿಯ ದೂರದರ್ಶನ ಚಂದನ ವಾಹಿನಿಯು ವಿಭಿನ್ನ ಹಾಗೂ ವಿನೂತನ ರೀತಿಯ "ರೈತ ರತ್ನ" 'ರಿಯಾಲಿಟಿ ಶೋ' ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ದೂರದರ್ಶನ, ಕೃಷಿ ವಿಶ್ವವಿದ್ಯಾಲಯ ಮತ್ತು ಕೃಷಿ ಇಲಾಖೆ ಸಂಯುಕ್ತವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಿವೆ. ಕಾರ್ಯಕ್ರಮದಲ್ಲಿ ಕೃಷಿಕರು, ಕೃಷಿ ಸಂಬಂಧಿತ ಚಟುವಟಿಕೆಗಳಲ್ಲಿ ಯಶಸ್ಸು ಕಂಡ ಸಾಧಕರನ್ನು ಪರಿಚಯಿಸಲಾಗುವುದು. ಈ ಮೂಲಕ ವಿಶೇಷವಾಗಿ ಯುವಕರ ಒಲವನ್ನು ಕೃಷಿಯತ್ತ ಹರಿಸಲು ಯತ್ನಿಸಲಾಗುತ್ತಿದೆ ಎಂದು ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿ. ಸುರೇಶ್ ತಿಳಿಸಿದ್ದಾರೆ.

**ಧ್ವನಿ : ಡಾ.ಎಸ್.ವಿ. ಸುರೇಶ್**

ಸರಣಿ ಪ್ರಸಾರದ ನಂತರ ಮೂವರು ಅತ್ಯುತ್ತಮ ಸಾಧಕರಿಗೆ ರೈತ ರತ್ನ ಪ್ರಶಸ್ತಿ ನೀಡಿ, ಗೌರವಿಸಲಾಗುವುದು ಎಂದು ಡಾ. ಸುರೇಶ್ ತಿಳಿಸಿದ್ದಾರೆ. ಬೆಂಗಳೂರು ದೂರದರ್ಶನ ಕೇಂದ್ರದ ಮುಖ್ಯಸ್ಥ ಎ.ಹನುಮಂತ್ ಮಾತನಾಡಿ, ಗ್ರಾಮೀಣಾ ಸೊಗಡಿನ ಈ ಕಾರ್ಯಕ್ರಮ ಸಾಮಾಜಿಕ ಜಾಲತಾಣ ಯುಟ್ಯೂಬ್‌ನಲ್ಲಿ ಲಭ್ಯವಿರಲಿದೆ ಎಂದು ತಿಳಿಸಿದರು.

**ಧ್ವನಿ : ಮುಖ್ಯಸ್ಥ ಎ. ಹನುಮಂತ್**

೨೬ ಕಂತುಗಳಲ್ಲಿ ಮೂಡಿಬರಲಿರುವ ಈ ಸರಣಿ ನಾಳೆಯಿಂದ ಪ್ರತಿ ಶನಿವಾರ ಸಂಜೆ ೬ ರಿಂದ ೭ ಗಂಟೆ ವರೆಗೆ ಪ್ರಸಾರವಾಗಲಿದೆ. ಮರುದಿನ ಅಂದರೆ ಭಾನುವಾರ ಮಧ್ಯಾಹ್ನ ೧೨ ರಿಂದ ೧ ಗಂಟೆವರೆಗೆ ಈ ಕಾರ್ಯಕ್ರಮ ಮರುಪ್ರಸಾರವಾಗಲಿದೆ.

<><><><>

ಭೂ ದಾಖಲೆಗಳ ಸ್ಕ್ಯಾನಿಂಗ್ ಬಗ್ಗೆ ಕಾಳಜಿ ವಹಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅವರು ಬೆಂಗಳೂರಿನ ವಿಕಾಸ ಸೌಧದಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ತಹಶೀಲ್ದಾರ್‌ಗಳ ಕಾರ್ಯಪ್ರಗತಿ ಪರಿಶೀಲನಾ ಸಭೆ ನಡೆಸಿದರು. ದಿನಕ್ಕೆ ಸರಾಸರಿ ೧೨ ಸಾವಿರ ಪುಟಗಳ ಸ್ಕ್ಯಾನ್ ಮಾಡಬೇಕೆಂಬುದು ಗುರಿಯಾಗಿದ್ದು, ಕೆಲ ತಾಲೂಕುಗಳಲ್ಲಿ ಸ್ಕ್ಯಾನಿಂಗ್ ೮ ಸಾವಿರ ಪುಟಗಳನ್ನು ದಾಟುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

<><><><>

ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ತಿಂಥಣಿ ಸೇತುವೆ ಬಳಿಯ ಶಾಂತಪುರ ಕ್ರಾಸ್ ಹತ್ತಿರ ಬೀದರ್- ಬೆಂಗಳೂರು ಹೆದ್ದಾರಿ ಮೇಲೆ ಇಂದು ಬೆಳಗ್ಗೆ ವಾಹನಗಳ ಢಿಕ್ಕಿಯಿಂದ ಸಂಭವಿಸಿದ ಬೆಂಕಿ ಅನಾಹುತದಲ್ಲಿ ಕನಿಷ್ಠ ನಾಲ್ಕು ಜನರು ಮೃತಪಟ್ಟಿದ್ದಾರೆ. ಲಿಂಗಸುಗೂರಿನಿಂದ ಕಲಬುರ್ಗಿ ಕಡೆಗೆ ಹೊರಟಿದ್ದ ಖಾಸಗಿ ಬಸ್ ಹಾಗೂ ಲಿಂಗಸುಗೂರ ಕಡೆಗೆ ಹೊರಟಿದ್ದ ಕಾರು ನಡುವೆ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದ್ದು, ಎರಡು ವಾಹನಗಳು ಡಿಕ್ಕಿ ಹೊಡೆದ ರಭಸಕ್ಕೆ ಬೆಂಕಿ ಹೊತ್ತಿಕೊಂಡಿದ್ದು ಕಾರು ಮತ್ತು ಬಸ್ ಸಂಪೂರ್ಣ ಕರಕಲಾಗಿವೆ. ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಎಲ್ಲರೂ ಸುಟ್ಟು ಕರಕಲಾಗಿದ್ದಾರೆ, ಸ್ಥಳದಲ್ಲಿರುವವರು ನೀಡಿರುವ ಮಾಹಿತಿ ಪ್ರಕಾರ ಆರು ಜನ ಸಾವನ್ನಪ್ಪಿದ್ದಾರೆ ಎಂದು ಹೇಳಲಾಗಿದೆ. ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿಗಳು ಆಗಮಿಸಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದಾರೆ. ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಮೃತರು ರಾಯಚೂರು ಜಿಲ್ಲೆ ಸಿರವಾರಕ್ಕೆ ಸೇರಿದವರೆಂದು ಹೇಳಲಾಗಿದೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರೈತರು ಯೂರಿಯಾ ರಸಗೊಬ್ಬರ ಖರೀದಿಸಲು ಇನ್ನು ಮುಂದೆ ಫಾರ್ಮರ್ ಐಡಿ ಸಂಖ್ಯೆ ಹೊಂದಿರುವುದು ಕಡ್ಡಾಯವಾಗಿದೆ ಎಂದು ಕೃಷಿ ಇಲಾಖೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಕಲಾವತಿ ತಿಳಿಸಿದ್ದಾರೆ. ರಸಗೊಬ್ಬರ

ತಯಾರಕರು, ಸರಬರಾಜುದಾರರು ಮತ್ತು ಮಾರಾಟಗಾರರ ಸಭೆಯಲ್ಲಿ ಮಾತನಾಡಿದ ಅವರು, ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರಲು ಮತ್ತು ಕಾಳಸಂತೆಯಲ್ಲಿ ಗೊಬ್ಬರ ಮಾರಾಟ ತಡೆಗಟ್ಟುವ ನಿಟ್ಟಿನಲ್ಲಿ ೨೦೨೪-೨೫ನೇ ಸಾಲಿನ ಮುಂಗಾರು ಹಂಗಾಮಿನಿಂದ ರಸಗೊಬ್ಬರ ಖರೀದಿಸಲು ಹೊಸ ನಿಯಮ ಜಾರಿಗೆ ಬರಲಿದೆ ಎಂದರು. ಕೆ-ಕಿಸಾನ್ ತಂತ್ರಾಂಶದ ಬಳಕ ರೈತರು ತಮ್ಮ ಜಮೀನಿನ ವಿಸ್ತೀರ್ಣ ಮತ್ತು ಬೆಳೆದ ಬೆಳೆಗೆ ಅನುಗುಣವಾಗಿ ಅಗತ್ಯ ಇರುವಷ್ಟು ಪ್ರಮಾಣದ ರಸಗೊಬ್ಬರವನ್ನು ಮಾತ್ರ ಕೆ ಕಿಸಾನ್ ತಂತ್ರಾಂಶದ ಮೂಲಕ ವಿತರಿಸಲಾಗುವುದು. ರಸಗೊಬ್ಬರ ಮಾರಾಟಗಾರರು ನಿಯಮ ಮೀರಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಿದರೆ ಅಥವಾ ಕೃಷಿಯೇತರ ಉದ್ದೇಶಕ್ಕೆ ರಸಗೊಬ್ಬರ ನೀಡಿದರೆ ಅಂತಹ ಮಾರಾಟಗಾರರ ಪರವಾನಾಗಿಯನ್ನು ರದ್ದುಗೊಳಿಸಲಾಗುವುದು ಎಂದರು.

<><><>

ಕಾಚೆಗುಡ-ಮುರುಡೇಶ್ವರ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಕುಮಟಾ ನಿಲ್ದಾಣದವರೆಗೆ ವಿಸ್ತರಿಸಲಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಈ ರೈಲು ಸೇವೆಯ ವಿಸ್ತರಣೆಯಿಂದಾಗಿ ಕುಮಟಾ ಮತ್ತು ಸುತ್ತಮುತ್ತಲಿನ ಕ್ಷೇತ್ರದ ಜನತೆಗೆ, ವ್ಯಾಪಾರಸ್ಥರಿಗೆ ಅನುಕೂಲವಾಗಲಿದೆ. ಪ್ರವಾಸಿಗರಿಗೆ ಹೈದರಾಬಾದ್ ಭಾಗಕ್ಕೆ ನೇರ ಸಂಪರ್ಕ ದೊರೆಯಲಿದೆ. ಇದರಿಂದ ಜಿಲ್ಲೆಯ ಆರ್ಥಿಕ ಮತ್ತು ಪ್ರವಾಸೋದ್ಯಮ ಬೆಳವಣಿಗೆಗೆ ಹೆಚ್ಚಿನ ಸಹಕಾರಿಯಾಗಲಿದೆ ಎಂದು ಸಂಸದ ಕಾಗೇರಿ ಮಾಹಿತಿ ನೀಡಿದ್ದಾರೆ.

<><><>

ದಾವಣಗೆರೆ ತಾಲ್ಲೂಕಿನ ದಿಂಡದಹಳ್ಳಿ ಗ್ರಾಮದ ಸಮುದಾಯವೊಂದರಲ್ಲಿ ಮಹಿಳೆಯರನ್ನು ಮಾಸಿಕ ಋತುಸ್ರಾವದ ಸಮಯದಲ್ಲಿ ಮೂರು ದಿನಗಳ ಕಾಲ ಮನೆಯಿಂದ ಹೊರಗಿಡಲಾಗುತ್ತಿದೆ ಎನ್ನುವ ವರದಿಗಳ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಇಂದು ಜನಜಾಗೃತಿ ಕಾರ್ಯಕ್ರಮ ನಡೆಸಲಾಯಿತು. ಘಟನೆಯ ಕುರಿತು ಪರಿಶೀಲಿಸಿ ವರದಿ ನೀಡುವಂತೆ ಮುಖ್ಯಮಂತ್ರಿಗಳ ಕಚೇರಿಯ ಕುಂದುಕೊರತೆ ವಿಭಾಗದ ವಿಶೇ? ಕರ್ತವ್ಯಾಧಿಕಾರಿಗಳು ನೀಡಿದ ಸೂಚನೆಯ ಮೇರೆಗೆ ಗ್ರಾಮಕ್ಕೆ ಭೇಟಿ ನೀಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಗ್ರಾಮಸ್ಥರೊಂದಿಗೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ 'ಕರ್ನಾಟಕ ಅನಿ? ಪದ್ಧತಿಗಳು ಮತ್ತು ಮೂಢನಂಬಿಕೆಗಳ ಪ್ರತಿಬಂಧಕ ಮತ್ತು ನಿರ್ಮೂಲನ ಕಾಯ್ದೆ-೨೦೧೭'

ರ ಬಗ್ಗೆ ಸಮಗ್ರ ಮಾಹಿತಿ ನೀಡಲಾಯಿತು. 'ಮಹಿಳೆಯರನ್ನು ಋತುಚಕ್ರದ ಹೆಸರಿನಲ್ಲಿ ಮನೆಯಿಂದ ಹೊರಗಿಡುವುದು ಕಾನೂನುಬಾಹಿರ ಮತ್ತು ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ. ಈ ಕಾಯ್ದೆಯಡಿ ಇಂತಹ ಕೃತ್ಯಗಳಿಗೆ ಕಠಿಣ ಶಿಕ್ಷೆ ಮತ್ತು ದಂಡ ವಿಧಿಸಲು ಅವಕಾಶವಿದೆ,' ಎಂದು ಅಧಿಕಾರಿಗಳು ಗ್ರಾಮಸ್ಥರಿಗೆ ಮನವರಿಕೆ ಮಾಡಿಕೊಟ್ಟರು. 'ಯಾವುದೇ ಕಾರಣಕ್ಕೂ ಇಂತಹ ಮೂಢನಂಬಿಕೆಗಳನ್ನು ಮುಂದುವರಿಸಬಾರದು. ಒಂದು ವೇಳೆ ಪದ್ಧತಿಯನ್ನು ನಿಲ್ಲಿಸದಿದ್ದರೆ ಕಾನೂನು ರೀತಿಯಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು,' ಎಂದು ದಾವಣಗೆರೆ ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>